ಶ್ರೀ ಹೆಚ್. ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದು ಸರ್ಕಾರಿ ನೌಕರಿ ಪಡೆದ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆ: 569

ಆ) ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದು ಸರ್ಕಾರಿ ಉದ್ಯೋಗ ಮತ್ತು ಶೈಕ್ಷಣಿಕ ಮೀಸಲಾತಿ ಪಡೆದವರ ವಿರುದ್ಧ ದೂರು / ಮಾಹಿತಿ ಸಿಕ್ಕ ತಕ್ಷಣವೇ ವಿಚಾರಣೆ ಕೈಗೊಳ್ಳಲಾಗುತ್ತಿದೆ. ವಿಚಾರಣೆ ಸಾಬೀತಾದಲ್ಲಿ ಸುಳ್ಳು ಜಾತಿ ಪ್ರಮಾಣ ಪತ್ರವನ್ನು ರದ್ದುಪಡಿಸಿ, ಅವರ ವಿರುದ್ಧ ಎಫ್.ಐ.ಆರ್ ದಾಖಲಿಸಿ, ಆರೋಪಿತರನ್ನು ಬಂಧಿಸಿ ಸೇವೆಯಿಂದ ವಜಾಗೊಳಿಸಲು ಕ್ರಮಕೈಗೊಂಡು ಅವರ ಆರ್ಥಿಕ ಸೌಲಭ್ಯವನ್ನು ಹಿಂಪಡೆಯಲು ಕ್ರಮಕೈಗೊಳ್ಳಲಾಗುತ್ತಿದೆ.

ಇ) ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದು ಸರ್ಕಾರಿ ಸೌಲಭ್ಯ ಪಡೆದವರ ವಿರುದ್ಧ ಆರೋಪ ಸಾಬೀತಾದಲ್ಲಿ ಅವರ ವಿರುದ್ಧ ಈಗಾಗಲೇ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ತಡೆ) ಕಾಯ್ದೆ 1989, ಮತ್ತು ಭಾರತೀಯ ದಂಡ ಸಂಹಿತೆ ಪ್ರಕಾರ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುತ್ತಿದೆ.

ನಿರುದ್ಯೋಗಿ ಯುವಕರಿಗೆ ತರಬೇತಿ

3274 (2556); ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮೀ ಲೇಔಟ್)

ಅ) ಬೆಂಗಳೂರು ನಗರದ ನಿರುದ್ಯೋಗಿ ಯುವಕರಿಗೆ ಮೊಬೈಲ್ ರಿಪೇರಿ ಹಾಗೂ ಇತರೆ ಸ್ವಯಂ ಉದ್ಯೋಗ ತರಬೇತಿ ನೀಡಲು ನೇರವಾಗಿ ಅರ್ಜಿ ಕರೆಯಲಾಗುವುದೇ?

ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಪಟ್ಟಿಯನ್ನು ಪಡೆದುಕೊಂಡು ತರಬೇತಿ ನೀಡುವ ಪದ್ಧತಿಯನ್ನು ಕೈಬಿಡಲಾಗುವುದೇ?

ಶ್ರೀ ಎಸ್.ಆರ್. ಪಾಟೀಲ್ (ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು)

ಅ) ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಐ.ಸಿ.ಟಿ ಕೌಶಲ್ಯಾಭಿವೃದ್ಧಿ ಸೊಸೈಟಿ ವತಿಯಿಂದ ಈಗಾಗಲೇ ಬೆಂಗಳೂರು ನಗರ ಜಿಲ್ಲೆಯಲ್ಲಿ ನಿರುದ್ಯೋಗಿ ಯುವಕರಿಗೆ ಮೊಬೈಲ್ ರಿಪೇರಿ ತರಬೇತಿ ಕಾರ್ಯಕ್ರಮವನ್ನು ಪ್ರಾರಂಭಿಸಲಾಗಿರುತ್ತದೆ (ಬ್ಯಾಚ್‌ವಾರು). ಈ ಕುರಿತು ಸ್ಥಳೀಯ ದಿನಪತ್ರಿಕೆಗಳಲ್ಲಿ ಜಾಹೀರಾತು ನೀಡಲಾಗುತ್ತದೆ. ತರಬೇತಿಗೆ ಸೇರಲು ಆಸಕ್ತ ನಿರುದ್ಯೋಗಿ ಯುವಕರು ಕೌಶಲ್ಯಾಭಿವೃದ್ಧಿ ಸೊಸೈಟಿಯ ವೆಬ್‌ಸೈಟ್‌ನಲ್ಲಿರುವ ನೋಂದಣಿ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಂಡು, ವಿವರಗಳನ್ನು ಭರ್ತಿ ಮಾಡಿ ತರಬೇತಿದಾರರ ಮೂಲಕ ಸದರಿ ಸೊಸೈಟಿಗೆ ಸಲ್ಲಿಸಬೇಕು.

ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಪಟ್ಟಿಯನ್ನು ಪಡೆದುಕೊಂಡು ತರಬೇತಿ ನೀಡುವ ಬಗ್ಗೆ ಕಿಯೋನಿಕ್ಸ್ ಸಂಸ್ಥೆಯಲ್ಲಿ ಯಾವುದೇ ಪ್ರಸ್ತಾವನೆ ಇರುವುದಿಲ್ಲ.